# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 813(911) |
| ಸದಸ್ಯರ ಹೆಸರು | : ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 24.07.2024 |
| ಉತ್ತರಿಸುವ ಸಚಿವರು | : ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಸರ್ಕಾರದ ಅಧೀನದಲ್ಲಿ ಬರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಇದುವರೆಗೆ ನಡೆದ ಬೋಧಕ ವರ್ಗದ ನೇಮಕಾತಿಯಲ್ಲಿ ವಿವಿಧ ವರ್ಗಗಳಿಗೆ ಎಂದರೆ ಎಸ್.ಸಿ/ಎಸ್.ಟಿ ಪ್ರವರ್ಗ-1ಕ್ಕೆ 40 ವರ್ಷ, 2ಎ, 2ಬಿ, 3ಎ, 3ಬಿ ಗೆ 38 ವರ್ಷ ಮತ್ತು ಸಾಮಾನ್ಯ ವರ್ಗಕ್ಕೆ 35 ವರ್ಷದ (ಬೋಧಕ ವರ್ಗದ ನೇಮಕಾತಿಯಂತೆ) ನಿಗದಿಪಡಿಸಿ ಆಯ್ಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? | ಹೌದು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿನ ಶಾಲೆ/ಕಾಲೇಜುಗಳಲ್ಲಿ ಬೋಧಕ ಹುದ್ದೆಗಳಿಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಹಾಗೂ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಮತ್ತು ಸರ್ಕಾರದ ಆದೇಶಗಳಲ್ಲಿ ವಿವಿಧ ವರ್ಗಗಳಿಗೆ ನಿಗದಿಪಡಿಸಿರುವ ವಯೋಮಿತಿಯಂತೆ ನೇಮಕಾತಿ ಮಾಡಲಾಗುತ್ತಿರುತ್ತದೆ. |
| ಆ) | ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ವಿವಿಧ ಇಲಾಖೆಗಳಲ್ಲಿ (ಪ್ರಾಥಮಿಕ ಪ್ರೌಢ ಶಿಕ್ಷಣ ಪದವಿ ಪೂರ್ವ ಉನ್ನತ ಶಿಕ್ಷಣ ಅನುದಾನಿತ ಶಾಲೆ/ಕಾಲೇಜುಗಳು ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ) ಬೋಧಕ ವರ್ಗವನ್ನು ನೇಮಕ ಮಾಡುವಾಗ ಅನುಸರಿಸುತ್ತಿರುವ ವಯೋಮಿತಿ ಬಗ್ಗೆ ಅಂದರೆ ಎಸ್‌ಸಿ/ಎಸ್.ಟಿ ಪ್ರವರ್ಗ-1ಕ್ಕೆ 45 ವರ್ಷ, ಸಾಮಾನ್ಯ ವರ್ಗಕ್ಕೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ? | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಇ) | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಬೋಧಕ ವರ್ಗವನ್ನು ನೇಮಕ ಮಾಡುವಾಗ ವಿವಿಧ ಇಲಾಖೆಗಳಲ್ಲಿ ಅನುಸರಿಸುತ್ತಿರುವ ವಯೋಮಿತಿಯನ್ನು ಏಕೆ ಅನುಸರಿಸುತ್ತಿಲ್ಲ; ಅನುಸರಿಸದಿರಲು ಕಾರಣವೇನು; | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿನ ಶಾಲೆ/ಕಾಲೇಜುಗಳಲ್ಲಿ ಬೋಧಕ ಹುದ್ದೆಗಳಿಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಹಾಗೂ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಮತ್ತು ಸರ್ಕಾರದ ಆದೇಶಗಳಲ್ಲಿ ವಿವಿಧ ವರ್ಗಗಳಿಗೆ ನಿಗಧಿಪಡಿಸಿರುವ ವಯೋಮಿತಿಯಂತೆ ನೇಮಕಾತಿ ಮಾಡಲಾಗುತ್ತಿರುತ್ತದೆ. ಇದಲ್ಲದೆ ಈ ಇಲಾಖೆಯಡಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಗರಿಷ್ಟ ವಯೋಮಿತಿಯಲ್ಲಿ ಒಂದು ಶೈಕ್ಷಣಿಕ ವರ್ಷ ಸೇವೆಸಲ್ಲಿಸಿರುವ ಅವಧಿಗೆ ಗರಿಷ್ಟ 5 ವರ್ಷದವರೆಗೆ ನೇಮಕಾತಿಯಲ್ಲಿ ವಯೋಮಿತಿ ಸಡಿಲಿಕೆ ನೀಡಲಾಗಿರುತ್ತದೆ. |

<table>
<tr><td>ಈ)</td><td>ಒಂದು ವೇಳೆ ಬೋಧಕ ವರ್ಗವನ್ನು ಬೋಧಕೇತರ ವರ್ಗದ ನೇಮಕಾತಿಯಂತೆ ವಯೋಮಿತಿ ನಿಗದಿಮಾಡಿ ಆಯ್ಕೆ ಮಾಡಿದರೆ ಅರ್ಹ ಹಿರಿಯ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಯಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td rowspan="2">ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಬೋದಕ ವರ್ಗದ ನೇಮಕಾತಿಯಲ್ಲಿ ಹಿರಿಯ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಿಂದ ವಂಚಿತರಾಗುತ್ತಿರುವ ಬಗ್ಗೆ ಯಾವುದೇ ಮನವಿ / ಆಕ್ಷೇಪಣೆಗಳು ಬಂದಿರುವುದಿಲ್ಲ.</td></tr>
<tr><td>ಉ)</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಬೋಧಕ ವರ್ಗದ ನೇಮಕಾತಿಯಲ್ಲಿ ಇತರೆ ಇಲಾಖೆಗಳಲ್ಲಿರುವಂತೆ ವಯೋಮಿತಿಯನ್ನು ಸಡಿಲಿಸಿ ಇನ್ನು ಮುಂದಿನ ಎಲ್ಲ ಆಯ್ಕೆ ಪ್ರಕ್ರಿಯೆಗಳನ್ನು ಮಾಡಲು ಕ್ರಮವಹಿಸಲಾಗುವುದೇ?</td></tr>
</table>

**ಸಂಖ್ಯೆ: MWD 157 LMQ 2024**

**(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರ